# <u>ಕರ್ನಾಟಕ ಸರ್ಕಾರದ ನಡೆವಳಿಗಳು</u>

ವಿಷಯ: ನಿವೃತ್ತರಾಗಲಿರುವ ಸರ್ಕಾರಿ ನೌಕರರ ಉಪದಾನದ (ಡಿ.ಸಿ.ಆರ್.ಜಿ.) ಗರಿಷ್ಟ ಮಿತಿಯನ್ನು ಹೆಚ್ಚಿಸುವ ಬಗ್ಗೆ.

**<u>ಪ್ರಸ್ತಾವನೆ:</u>** 2010–11ರ ಸಾಲಿನ ರಾಜ್ಯ ಆಯವ್ಯಯ ಭಾಷಣದಲ್ಲಿ ನಿವೃತ್ತ ಸರ್ಕಾರಿ ನೌಕರರಿಗೆ ನೀಡುವ ಉಪದಾನದ ಮೇಲಿನ ಮಿತಿಯನ್ನು ರೂ.3ಲಕ್ಷದಿಂದ 6ಲಕ್ಷಕ್ಕೆ ಏರಿಸಲಾಗುವುದು ಎಂದು ಘೋಷಿಸಲಾಗಿದೆ. ಆದುದರಿಂದ ಈ ಕೆಳಗಿನ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 03 ಪಿಇಎನ್ 2009</u>**
**<u>ಬೆಂಗಳೂರು, ದಿನಾಂಕ: 3ನೇ ಜೂನ್ 2010.</u>**

ನಿವೃತ್ತ ಸರ್ಕಾರಿ ನೌಕರರಿಗೆ ನೀಡುವ ನಿವೃತ್ತಿ ಉಪದಾನದ ಮೇಲಿನ ಮಿತಿಯನ್ನು ಪ್ರಸಕ್ತ ರೂ. 3ಲಕ್ಷದಿಂದ ರೂ.6ಲಕ್ಷಕ್ಕೆ (ಆರು ಲಕ್ಷ ರೂಪಾಯಿಗಳು ಮಾತ್ರ) ಈ ಮೂಲಕ ಏರಿಸಲಾಗಿದೆ. ಈ ಆದೇಶವು ದಿನಾಂಕ: 31.03.2010 ಮತ್ತು ತದನಂತರ ನಿವೃತ್ತರಾಗಲಿರುವ/ಸೇವೆಯಲ್ಲಿರುವಾಗ ಮೃತಪಟ್ಟ ನೌಕರರಿಗೆ ಅನ್ವಯವಾಗುವುದು.

ಕರ್ನಾಟಕ ಸಿವಿಲ್ ಸೇವಾ ನಿಯಮಾವಳಿಗೆ ಅವಶ್ಯವಿರುವ ಔಪಚಾರಿಕ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯು.ಪಿ. ಪ್ರಭು)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪಕಾರ್ಯದರ್ಶಿ,(ವಿಶ್ರಾಂತಿ ವೇತನ)
ಆರ್ಥಿಕ ಇಲಾಖೆ.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಸ್ಥರು.
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ.
20. ಶಾಖೆಯ ರಕ್ಷಾ ಕಡತ.